# ಕನ್ನಡ ಭಾಷೆಯಲ್ಲ ಸಂಸ್ಕೃತಿ



ಕಾರ್ಕಳ ಮಂಜುನಾಥ ಪೈ ಪದವಿ ಕಾಲೇಜಿನಲ್ಲಿ ಆಯೋಜಿಸಿದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ನಿವೃತ್ತ ಮುಖ್ಯಶಿಕ್ಷಕ ಶ್ರೀರಂಗ ಜೋಷಿ ಮಾತನಾಡಿದರು.

**ಕಾರ್ಕಳ:** ಕನ್ನಡ ಕೇವಲ ಭಾಷೆಯಲ್ಲ, ನಮ್ಮೊಳಗಿನ ಸಂಸ್ಕೃತಿ. ಭಾಷೆ, ಸಂಸ್ಕೃತಿ ಹಾಗೂ ಪರಂಪರೆ ನಮ್ಮ ಮಕ್ಕಳ ಭವಿಷ್ಯವಾಗಬೇಕು ಎಂದು ನಿವೃತ್ತ ಮುಖ್ಯಶಿಕ್ಷಕ ಶ್ರೀರಂಗ ಜೋಷಿ ಹೇಳಿದರು.

ಮಂಜುನಾಥ ಪೈ ಪದವಿ ಕಾಲೇಜಿನಲ್ಲಿ, ಕಾಲೇಜು ವಿದ್ಯಾರ್ಥಿ ವೇದಿಕೆ ಹಾಗೂ ಸಾಹಿತ್ಯ ಸಂಘ ಆಶ್ರಯದಲ್ಲಿ ಆಯೋಜಿಸಿದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಕನ್ನಡ ಧ್ವಜಾರೋಹಣ ನೆರವೇರಿಸಿ, ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕನ್ನಡ ಮಾಧ್ಯಮದಲ್ಲಿ ಕಲಿತ ಮಕ್ಕಳು ಮುಂದೆ ಕ್ರಿಯಾತ್ಮಕವಾಗಿ ತಮ್ಮನ್ನು ಎಲ್ಲ ಕಡೆಗಳಲ್ಲಿ ತೊಡಗಿಸಿಕೊಳ್ಳುತ್ತಾರೆ. ಇಂತಹ ಸಂಸ್ಕೃತಿ ಆಂಗ್ಲ ಮಾಧ್ಯಮದಲ್ಲಿ ಕಲಿತ ವಿದ್ಯಾರ್ಥಿಗಳಲ್ಲಿ ಕಾಣುವುದಿಲ್ಲ ಎಂದರು.

ಸಾಹಿತಿ ಡಾ.ವರದರಾಜ ಚಂದ್ರಗಿರಿ ಪ್ರಾಸ್ತಾವಿಕವಾಗಿ ಮಾತನಾಡಿ, ಪಾರಂಪರಿಕ ಪದಗಳೊಂದಿಗೆ ಇಡೀ ನಮ್ಮ ಸಂಸ್ಕೃತಿ ಬೆರತುಕೊಂಡಿದೆ. ಆಂಗ್ಲಭಾಷೆಯನ್ನು ಬಿಟ್ಟು ಬದುಕಲು ಇಂದಿನ ತಾಂತ್ರಿಕ ಯುಗದಲ್ಲಿ ಅಸಾಧ್ಯ. ಆದ್ದರಿಂದ ಜತೆಯಲ್ಲಿ ನಮ್ಮ ಭಾಷೆಯನ್ನು ಬಳಸುತ್ತ ಬೆಳೆಸಬೇಕು ಎಂದು ಹೇಳಿದರು.

ಪ್ರಾಂಶುಪಾಲ ಪ್ರೊ.ಶ್ರೀವರ್ಮ ಅಜ್ರಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಉಪನ್ಯಾಸಕರಾದ ಯೋಗೇಶ್ ಡಿ.ಎಚ್., ವಿದ್ಯಾಧರ ಹೆಗಡೆ, ಮಂಜುನಾಥ, ಜ್ಯೋತಿ ಎಲ್. ಜನ್ನೆ, ಗಣೇಶ್, ನವೀನ್, ದಿವ್ಯಾ ಪ್ರಭು ಹಾಗೂ ಅತಿಥಿ ಉಪನ್ಯಾಸಕರು ಪಾಲ್ಗೊಂಡಿದ್ದರು.

ಎಂ.ಕಾಂ ವಿದ್ಯಾರ್ಥಿಗಳು ಕನ್ನಡ ಗೀತೆಗಳನ್ನು ಹಾಡಿ, ನೃತ್ಯ ಕಾರ್ಯಕ್ರಮ ನಡೆಸಿಕೊಟ್ಟರು. ಡಾ.ವರದರಾಜ್ ಚಂದ್ರಗಿರಿ ಸ್ವಾಗತಿಸಿದರು. ವಿದ್ಯಾರ್ಥಿ ಸಂತೋಷ್ ಪ್ರಾರ್ಥಿಸಿದರು, ಸುಷ್ಮಾ ಡಿಸೋಜ ವಂದಿಸಿದರು. ವಿದ್ಯಾರ್ಥಿನಿ ಅಕ್ಷತಾ ಕಾರ್ಯಕ್ರಮ ನಿರೂಪಿಸಿದರು.